ಶ್ರೀ ಜಗದೀಶ್ ಶೆಟ್ಟರ್ : ಮಾನ್ಯ ಅಧ್ಯಕ್ಷರೆ, ಒಂದು ವಿಷಯ.

ಅಧ್ಯಕ್ಷರು : ಈಗ ಸದನವನ್ನು ಸೋಮವಾರ ಬೆಳಿಗ್ಗೆ 11-00 ಘಂಟೆವರೆಗೆ ಮುಂದೂಡುತ್ತಿದ್ದೇನೆ.

(ಸಭೆಯು 4 ಗಂಟೆ 45 ನಿಮಿಷಕ್ಕೆ ಮುಂದೂಡಲ್ಪಟ್ಟು ಮತ್ತೆ ದಿ : 26.07.04 ರಂದು ಸೋಮವಾರ ಬೆಳಿಗ್ಗೆ 11 ಗಂಟೆಗೆ ಸೇರಲು ನಿಶ್ಚಯಿಸಿತು.)

10. ಅನುಬಂಧ I

ರಾಜ್ಯದಲ್ಲಿ ಸ್ವಯಂ ಘೋಷಿತ ಆಸ್ತಿ ತೆರಿಗೆ ಮಸೂದೆಗೆ ತಿದ್ದುಪಡಿಸಿರುವ ಬಗ್ಗೆ

154(69) ಶ್ರೀ ಕೆ.ಎಸ್. ಈಶ್ವರಪ್ಪ(ಶಿವಮೊಗ್ಗ) : ಮಾನ್ಯ ಪೌರಾಡಳಿತ ಹಾಗೂ ಕೆ.ಯು.ಐ.ಡಿ.ಎಫ್.ಸಿ. ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ರಾಜ್ಯದಲ್ಲಿ ಸ್ವಯಂಘೋಷಿತ ಆಸ್ತಿತೆರಿಗೆಯನ್ನು ಅವೈಜ್ಞಾನಿಕವಾಗಿ ಜಾರಿಗೆ ತಂದಿರುವುದರಿಂದ ಅದನ್ನು ತಿದ್ದುಪಡಿ ಮಸೂದೆ ಜಾರಿಗೆ ತರುವುದರ ಮೂಲಕ ವೈಜ್ಞಾನಿಕವಾಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು) ?

ಶ್ರೀ ಎಸ್.ಆರ್. ಮೋರೆ (ಪೌರಾಡಳಿತ ಹಾಗೂ ಕೆ.ಯು.ಐ.ಡಿ.ಎಫ್.ಸಿ ಸಚಿವರು): ಅ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಯಂಘೋಷಿತ ಆಸ್ತಿ ತೆರಿಗೆ ಪದ್ಧತಿಯನ್ನು ಜಾರಿಗೆ ತಂದ ನಂತರ ಬಹುತೇಕ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಆದಾಯವು ಹೆಚ್ಚಿದ್ದು, ಈ ಪದ್ಧತಿಯು ಸ್ವಯಂ ಘೋಷಿತ ಆಸ್ತಿ ತೆರಿಗೆ ಪದ್ಧತಿಯ ವೈಜ್ಞಾನಿಕ ಹಾಗೂ ಪಾರದರ್ಶಕವಾಗಿರುತ್ತದೆ. ಇದರ ವಿರುದ್ಧ ನೂರಾರು ಅರ್ಜಿಗಳು ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದು, ಉಚ್ಚನ್ಯಾಯಾಲಯವು ಸರ್ಕಾರದ ನಿಲುವನ್ನು ಶ್ಲಾಘಿಸಿ, ಸದರಿ ರಿಟ್ ಅರ್ಜಿಗಳನ್ನು ವಜಾಗೊಳಿಸಿದೆ. ಸ್ವಯಂಘೋಷಿತ ಆಸ್ತಿ ತೆರಿಗೆ ಪದ್ಧತಿಗೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ಬರುತ್ತಿದೆ. ಆದರೆ ಶಿವಮೊಗ್ಗ, ಮಂಗಳೂರು ಮತ್ತು ಮಂಡ್ಯ ನಗರಸಭೆಗಳ ವ್ಯಾಪ್ತಿಯಲ್ಲಿ ಕೆಲವು ಸಂಘ ಸಂಸ್ಥೆಗಳು ಮಾತ್ರ ಈ ಪದ್ಧತಿಯ ವಿರುದ್ಧ ದೂರು ಸಲ್ಲಿಸಿ ಕೆಲವು ಬದಲಾವಣೆಗಳನ್ನು ಕೋರಿರುತ್ತಾರೆ.

ಬಸವ ಕಲ್ಯಾಣ ಕುಡಿಯುವ ನೀರಿನ ಯೋಜನೆ.

156(369) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಕೂಬ.(ಬಸವಕಲ್ಯಾಣ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬಸವಕಲ್ಯಾಣ ಪುರಸಭೆಯ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸರಬರಾಜಿಗೆ ಅಳವಡಿಸಿರುವ ಪೈಪುಗಳು ತುಂಬಾ ಹಳೆಯದಾಗಿರುವುದರಿಂದ ಇಲ್ಲಿನ ಜನತೆಗೆ ಕಲುಷಿತ ನೀರು ಸರಬರಾಜಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಬಸವಕಲ್ಯಾಣ ಪಟ್ಟಣದ ಅಂಬೇಡ್ಕರ್ ವೃತ್ತದಿಂದ ತ್ರಿಪುರಾಂತ ಬಡಾವಣೆವರೆಗಿನ ಪೈಪುಗಳು ಬದಲಾವಣೆಯ ಸಲುವಾಗಿ ಸುಮಾರು 42,40,000/- ರೂ.ಗಳ ಅಂದಾಜು ವೆಚ್ಚವನ್ನು ಸಿದ್ಧಪಡಿಸಿದ್ದು, ಈ ಪ್ರಸ್ತಾವನೆಯು ಈಗ ಸರ್ಕಾರದಿಂದ ಕರ್ನಾಟಕ ನಗರ ನೀರು ಸರಬರಾಜು ಮಂಡಳಿಗೆ ಬಂದಿರುವುದು ನಿಜವಲ್ಲವೇ ;

ಇ) ಹಾಗಿದ್ದಲ್ಲಿ, ಸದರಿ ಕಾಮಗಾರಿಗೆ ಅಗತ್ಯವಿರುವ ಮೇಲ್ಕಂಡ ಮೊತ್ತದ ಹಣವನ್ನು ಬಿಡುಗಡೆ ಮಾಡಲಾಗಿದೆಯೇ ;

(† ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ)